<u>ಅಸಲು ದಾವಾ ಸಂಖ್ಯೆ:**-205/2020**</u> ಪಿ.<u>ಡಬ್ಲ್ಯೂ:-</u> **1**

ದಿನಾಂಕಃ **04-04-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-</u>

2015-16 ರಲ್ಲಿ ನನ್ನ ತಾಯಿ ಮತ್ತು ನನ್ನ ತಂಗಿ ಜೀವನಾಂಶವನ್ನು ಕೋರಿ ಸಲ್ಲಿಸಿದ್ದರು. ನಮ್ಮ ತಾಯಿ ಮತ್ತು ನನ್ನ ತಂಗಿ ಜೀವನಾಂಶದ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಸರ್ವೇ ನಂ.11/1 ರಲ್ಲಿ 1 ಎಕರೆ 10 ಗುಂಟೆ ಜಮೀನು ಮತ್ತು 2 ನೇ ಪ್ರತಿವಾದಿ ಆಸ್ತಿಗಳನ್ನು ಖರೀದಿ ಮಾಡಿದ್ದಾರೆ ಆದರೆ ನಿರ್ದಿಷ್ಟವಾಗಿ ಅದರ ಸರ್ವೇ ನಂಬರ್ ಮತ್ತು ವಿಸ್ತೀರ್ಣ ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿ ಖರೀದಿ ಮಾಡಿದ ಆಸ್ತಿಗಳು ಅವರ ಹೆಸರಿಗೆ ಖಾತೆ ಆಗಿರುತ್ತದೆ. 2 ನೇ ಪ್ರತಿವಾದಿ ದಾವಣಗೆರೆ ಜಿಲ್ಲೆ ಮತ್ತು ತಾಲ್ಲೂಕಿನಲ್ಲಿರುವ ಕೋಲಕುಂಟೆ ಗ್ರಾಮದಲ್ಲಿ ಖರೀದಿ ಮಾಡಿದ್ದಾರೆ. 2 ನೇ ಪ್ರತಿವಾದಿ ಕೋಲಕುಂಟೆ ಗ್ರಾಮದಲ್ಲಿ ಆಸ್ತಿಗಳನ್ನು ಖರೀದಿ ಮಾಡಿದ ವಿಚಾರವನ್ನು ವಾದ ಪತ್ರದಲ್ಲಾಗಲೀ ಅಥವಾ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದು ಮಾಡಿಲ್ಲ ಎಂಬ ಪ್ರಶ್ನೆಗೆ ಸಾಕ್ಷಿಯು ನಮ್ಮ ವಕೀಲರಿಗೆ ತಿಳಿಸಿದ್ದೆವು ಆದರೆ ಅವರು ನಮೂದು ಮಾಡಿದ್ದಾರೋ ಅಥವಾ ಇಲ್ಲವೋ ಎಂದು ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿಯು ಆಸ್ತಿಗಳನ್ನು ಖರೀದಿ ಮಾಡಿದ ಬಗ್ಗೆ ದಾಖಲಾತಿಗಳನ್ನು ಹಾಜರುಪಡಿಸಿದ್ದೀರಾ ಎಂಬ ಪ್ರಶ್ನೆಗೆ ಸಾಕ್ಷಿಯು ನಾವು ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಮಾತ್ರ ಭಾಗಾಂಶವನ್ನು ಕೇಳುತ್ತಿದ್ದೇವೆ ಹೊರತು 2 ನೇ ಪ್ರತಿವಾದಿ ತಾನು ಖರೀದಿ ಮಾಡಿದ ಆಸ್ತಿಗಳ ಮೇಲೆ ನಮಗೆ ಯಾವುದೇ ತರಹದ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದು ನುಡಿಯುತ್ತಾರೆ. ನನ್ನ ಮತ್ತು ಪ್ರತಿವಾದಿ 1 ಮತ್ತು 2 ರವರ ನಡುವೆ ಕುಟುಂಬದ ಆಸ್ತಿಗಳಿಗೆ ಸಂಬಂಧಿಸಿದಂತೆ ಯಾವುದೇ ವಿಭಾಗ ಆಗಿರುವುದಿಲ್ಲ. ನಮ್ಮ ತಂದೆಯ ಹೆಸರಿಗೆ ದಾವಾ ಆಸ್ತಿಯನ್ನು ಹೊರತುಪಡಿಸಿ ಒಂದು ಮನೆ ಇರುತ್ತದೆ.

ನಮಗೆ ಮನೆಯಲ್ಲಿ ಯಾವುದೇ ಭಾಗಾಂಶ ಬೇಡವೆಂದು ಅದನ್ನು ಈ ದಾವೆಯಲ್ಲಿ ಸೇರಿಸಿಲ್ಲ. 1 ನೇ ಪ್ರತಿವಾದಿ ನಮ್ಮ ತಾಯಿಯನ್ನು ಈಗ್ಗೆ 28 ವರ್ಷಗಳ ಹಿಂದೆ ಮದುವೆಯಾಗಿರುತ್ತಾರೆ. ಆದರೆ ನಿರ್ದಿಷ್ಟವಾದ ದಿನಾಂಕ ನನಗೆ ನೆನಪಿಲ್ಲ. ನಮ್ಮ ತಾಯಿ 1 ನೇ ಪ್ರತಿವಾದಿಯನ್ನು ಮದುವೆಯಾದ ನಂತರ 5-6 ವರ್ಷಗಳ ಕಾಲ ಕಮ್ಮರಗಟ್ಟೆ ಗ್ರಾಮದಲ್ಲಿ ವಾಸವಾಗಿದ್ದರು. ತದನಂತರ ನಮ್ಮ ತಂದೆ ತಾಯಿ ನಡುವೆ ಮನಸ್ತಾಪ ಬಂದಿದ್ದರಿಂದ ನನ್ನ ತಾಯಿ ದಾವಣಗೆರೆಯಲ್ಲಿ ವಾಸವಾಗಿದ್ದಾರೆ. ನಮ್ಮ ತಾಯಿ 1 ನೇ ಪ್ರತಿವಾದಿಯನ್ನು ಬಿಟ್ಟು ದಾವಣಗೆರೆಗೆ ವಾಸ ಮಾಡಲು ಬಂದ ನಂತರ ಪ್ರತಿವಾದಿ 1 ಮತ್ತು 2 ರವರು ಒಟ್ಟಿಗೆ ವಾಸವಾಗಿದ್ದಾರೆ. ಪ್ರತಿವಾದಿ 1 ಮತ್ತು 2 ರವರು ಕುಟುಂಬದ ಆಸ್ತಿಗಳನ್ನು ವಿಭಾಗ ಮಾಡಿಕೊಂಡಿರುವುದಿಲ್ಲ. 1 ನೇ ಪ್ರತಿವಾದಿ ದಾವಾ ಆಸ್ತಿಯನ್ನು 3 ಮತ್ತು 4 ನೇ ಪ್ರತಿವಾದಿಗಳಿಗೆ ಮಾರಾಟ ಮಾಡಿ ಅದರಿಂದ ಬಂದ ಹಣವನ್ನು ನಮ್ಮ ತಾಯಿ ಮತ್ತು ತಂಗಿಗೆ ಜೀವನಾಂಶದ ಹಣವನ್ನು ಕೊಟ್ಟಿದ್ದಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ನಮ್ಮ ತಂದೆ ತಾಯಿಗೆ ತಮ್ಮ ದುಡಿಮೆ ಇಂದ ಬಂದಂತಹ ಹಣವನ್ನು ಕೊಟ್ಟಿರುತ್ತಾರೆ ವಿನಃ ದಾವಾ ಆಸ್ತಿಯನ್ನು ಮಾರಾಟ ಮಾಡಿರುವುದಿಲ್ಲ. ಸದರಿ ಮೇಲ್ಕಂಡ ವಿಚಾರವನ್ನು ವಾದ ಪತ್ರದಲ್ಲಿ ನಮೂದು ಮಾಡಿದ್ದೆವು. 1 ಮತ್ತು 2 ನೇ ಪ್ರತಿವಾದಿಗಳು ತಮ್ಮ ಕುಟುಂಬದ ಎಲ್ಲಾ ವ್ಯವಹಾರಗಳು ಗೊತ್ತಿದ್ದರೂ ಸಹ 3 ಮತ್ತು 4 ನೇ ಪ್ರತಿವಾದಿಗಳಿಗೆ ಮೋಸ ಮಾಡುವ ಉದ್ದೇಶದಿಂದ ಮಾರಾಟ ಮಾಡಿದ್ದಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ದಾವಾ ಆಸ್ತಿಯನ್ನು 3 ಮತ್ತು 4 ನೇ ಪ್ರತಿವಾದಿಗಳಿಗೆ ಮಾರಾಟ ಮಾಡಿ ಅದರಿಂದ ಬಂದಂತಹ ಹಣವನ್ನು 2 ನೇ ವಾದಿಗೆ ಮತ್ತು ನಮ್ಮ ತಾಯಿಗೆ ಜೀವನಾಂಶವಾಗಿ ಕೊಡುವ ವಿಚಾರದ ಬಗ್ಗೆ ನನಗೆ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 3 ಮತ್ತು 4 ನೇ ಪ್ರತಿವಾದಿಗಳಿಗೆ ಮೋಸ ಮಾಡುವ ಉದ್ದೇಶದಿಂದ ವಾದಿಗಳು ಮತ್ತು ಪ್ರತಿವಾದಿ 1 ಮತ್ತು 2 ರವರು ಶಾಮೀಲಾಗಿ ಉದ್ದೇಶ ಪೂರ್ವಕವಾಗಿ ಕೋಲುಕುಂಟೆ ಗ್ರಾಮದಲ್ಲಿರುವ ಜಮೀನನ್ನು ಮತ್ತು ಕಮ್ಮಾರಗಟ್ಟೆ ಗ್ರಾಮದಲ್ಲಿರುವ ಮನೆಯನ್ನು ಈ ದಾವೆಯಲ್ಲಿ ಸೇರಿಸಿಲ್ಲ ಎಂದರೆ ಸರಿಯಲ್ಲ. ನಮಗೆ ಪಿತ್ರಾರ್ಜಿತ ಆಸ್ತಿಯಲ್ಲಿ ಮಾತ್ರ ಭಾಗಾಂಶದ ಹಕ್ಕು

ಬೇಕಾಗಿರುವುದರಿಂದ ಕೋಲುಕುಂಟೆ ಗ್ರಾಮದಲ್ಲಿರುವ ಜಮೀನನ್ನು ಮತ್ತು ಕಮ್ಮಾರಗಟ್ಟೆ ಗ್ರಾಮದಲ್ಲಿರುವ ಮನೆಯನ್ನು ಈ ದಾವೆಯಲ್ಲಿ ಸೇರಿಸಿಲ್ಲ ಎಂದು ನುಡಿಯುತ್ತಾರೆ. 1 ನೇ ಪ್ರತಿವಾದಿಗೆ ನಾನು, ನನ್ನ ತಂಗಿ ಮತ್ತು ನನ್ನ ತಾಯಿ ಮತ್ತು 2 ನೇ ಪ್ರತಿವಾದಿ ಮಾನಸಿಕ ಸಾಕಷ್ಟು ತೊಂದರೆಯನ್ನುಂಟು ಮಾಡಿ 1 ನೇ ಪ್ರತಿವಾದಿಯ ಮೂಲಕ ದಾವಾ ಆಸ್ತಿಯನ್ನು 3 ಮತ್ತು 4 ನೇ ಪ್ರತಿವಾದಿಗೆ ಮಾರಾಟ ಮಾಡಿ ಅದರಿಂದ ಬಂದಂತಹ ಹಣವನ್ನು ನಾವು ಪಡೆದುಕೊಂಡಿದ್ದೇವೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ 3 ಮತ್ತು 4 ನೇ ಪ್ರತಿವಾದಿಗೆ ದಾವಾ ಆಸ್ತಿಯನ್ನು ಮಾರಾಟ ಮಾಡಿರುವವಿಚಾರ ಗೊತ್ತಿದ್ದರೂ ಸಹ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ವಾದಿ ಮತ್ತು ಪ್ರತಿವಾದಿಗಳು ಶಾಮೀಲಾಗಿ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ಆಟೋ ಚಾಲನೆ ಮಾಡಿಕೊಂಡು ಮೇಸ್ತ್ರಿ ಕೆಲಸವನ್ನು ಸಹ ಮಾಡುತ್ತಿದ್ದಾರೆ. ವಾದ ಪತ್ರದಲ್ಲಿ 2 ನೇ ಪ್ರತಿವಾದಿ ಆಟೋ ಚಾಲನೆ ಮಾಡಿಕೊಂಡು ಮೇಸ್ತ್ರಿ ಕೆಲಸ ಮಾಡುವ ಬಗ್ಗೆ ನಮೂದು ಮಾಡಿರುವುದಿಲ್ಲ. 2 ನೇ ಪ್ರತಿವಾದಿ ಈಗ ಕೋಲುಕುಂಟೆ ಗ್ರಾಮದಲ್ಲಿ ವಾಸವಾಗಿದ್ದಾರೆ. ಪ್ರತಿವಾದಿ 3 ಮತ್ತು 4 ರವರಿಗೆ ಮೋಸ ಮಾಡುವ ಉದ್ದೇಶದಿಂದ ವಾದಿ ಮತ್ತು ಪ್ರತಿವಾದಿ 2 ರವರು ಮತ್ತು ನನ್ನ ತಾಯಿ ಹಾಲಮ್ಮರವರು ಒಟ್ಟಾಗಿ ವಾಸವಾಗಿದ್ದೇವೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.